# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ

ಅಂಜನಾಪುರ ಉಪ ವಿಭಾಗ

2ನೇ ಮುಖ್ಯ ರಸ್ತೆ, 6ನೇ ಅಡ್ಡರಸ್ತೆ, ಆರ್.ಬಿ.ಐ ಲೇಔಟ್, ಕೊತ್ತನೂರು ಮುಖ್ಯರಸ್ತೆ, ಬೆಂಗಳೂರು-560078

ಸಂಖ್ಯೆ : ಸ.ಕಾ.ಅ/ಅ.ಉ.ವಿ/ಪಿ.ಆರ್/ /2022-23 ದಿನಾಂಕ :

## ವಾರ್ಡ್ ಸಮಿತಿ ಸಭೆಯ ನಡವಳಿಗಳು

ವಿಷಯ: ಮಾನ್ಯ ಆಯುಕ್ತರು ಬಿಬಿಎಂಪಿ ರವರ ಆದೇಶ ಸಂಖ್ಯೆ.ಬಿ(12)ಪಿಆರ್/35/2020-21 ದಿ:21.09.2020 ರವರ ಆದೇಶದಂತೆ ದಿ:03-09-2022 ರಂದು ವಾರ್ಡ್ ನಂ.195-ಕೋಣನಕುಂಟೆ ವಾರ್ಡ್ ಕಛೇರಿಯ ಉದ್ಯಾನವನದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

********

## ಸಭೆಗೆ ಹಾಜರಾಗಿದ್ದವರ ವಿವರಗಳು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಂಜನಾಪುರ ವಾರ್ಡ್ ಸಂಖ್ಯೆ.195ರಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀ ಟಿ.ನಟರಾಜ ರವರು ದಿನಾಂಕ: 03-09-2022 ರಂದು ಶನಿವಾರ 11.30ಕ್ಕೆ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸಭೆಗೆ ಆಗಮಿಸಿರುವ ಸಮಿತಿಯ ಸದಸ್ಯರಿಗೆ ಶ್ರೀ ಕಾರ್ಯದರ್ಶಿ/ಸಹಾಯಕ ಅಭಿಯಂತರರು ಆದ ಶ್ರೀಮತಿ ಶಿಲ್ಪ.ಎನ್ ರವರು ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

## ಸಭೆಗೆ ಹಾಜರಾಗಿದ್ದವರ ಅಧಿಕಾರಿ/ಸಿಬ್ಬಂದಿಗಳ ವಿವರಗಳು

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ | ಹಾಜರಾತಿ |
|---|---|---|---|
| 1 | ಶ್ರೀ ಟಿ.ನಟರಾಜ | ನೋಡಲ್ ಅಧಿಕಾರಿ | ಹಾಜರಿರುತ್ತಾರೆ. |
| 2 | ಶ್ರೀಮತಿ ಶಿಲ್ಪ.ಎನ್ | ಸದಸ್ಯ ಕಾರ್ಯದರ್ಶಿ/ಸಹಾಯಕ ಅಭಿಯಂತರರು | ಹಾಜರಿರುತ್ತಾರೆ. |
| 3 | ಶ್ರೀಮತಿ ಶೋಭ | ಹಿರಿಯ ಕಿರಿಯ ಆರೋಗ್ಯ ಪರಿವೀಕ್ಷಕರು | ಹಾಜರಿರುತ್ತಾರೆ. |
| 4 | ಶ್ರೀ ಮೋಹನ್ | ಕಿರಿಯ ಆರೋಗ್ಯ ಪರಿವೀಕ್ಷಕರು | ಹಾಜರಿರುತ್ತಾರೆ. |
| 5 | ಶ್ರೀ ಪ್ರಕಾಶ್.ಐ | ಕೆಲಸ ಪರಿವೀಕ್ಷಕರು | ಹಾಜರಿರುತ್ತಾರೆ. |
| 6 | ಶ್ರೀ ಶ್ರೀನಿವಾಸ್ | ಬಿಬಿಎಂಪಿ ಮಾರ್ಷಲ್ | ಹಾಜರಿರುತ್ತಾರೆ. |
| 7 | ಶ್ರೀಮತಿ ಭುವನೇಶ್ವರಿ | ನಗರ ಪ್ರಾಥಮಿಕ ಆರೋಗ್ಯ ಕೇಂದ್ರ | ಹಾಜರಿರುತ್ತಾರೆ. |
| 8 | ಶ್ರೀ ರಾಮಚಂದ್ರ | ಟ್ಯಾಕ್ಸ್ ಇನ್ಸ್‌ಪೆಕ್ಟರ್ | ಗೈರು ಹಾಜರಿರುತ್ತಾರೆ. |
| 9 | ಶ್ರೀ ಜಗದೀಶ್ | ಬೀದಿ ದೀಪಗಳ ನಿರ್ವಹಣೆ | ಗೈರು ಹಾಜರಿರುತ್ತಾರೆ. |

## ಸಭೆಗೆ ಹಾಜರಾಗಿದ್ದವರ ಬಡಾವಣೆಗಳ ಕ್ಷೇಮಾಭಿವೃದ್ಧಿ ಸಂಘ/ಸಾರ್ವಜನಿಕರು ವಿವರಗಳು

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಬಡಾವಣೆಗಳ ಕ್ಷೇಮಾಭಿವೃದ್ಧಿ ಸಂಘ | ಹಾಜರಾತಿ |
|---|---|---|---|
| 1 | ಶ್ರೀಮತಿ ಕುಮಾರಿ.ಡಿ | | ಹಾಜರಿರುತ್ತಾರೆ. |
| 2 | ಶ್ರೀ ಜಿ.ವಿ.ಹೆಬ್ಬಾರ್ | | ಹಾಜರಿರುತ್ತಾರೆ. |
| 3 | ಶ್ರೀಮತಿ ಪ್ರಭಾ.ಸಿ.ಜಿ | | ಹಾಜರಿರುತ್ತಾರೆ. |
| 4 | ಶ್ರೀ ಪ್ರಶಾಂತ್ ಕುಮಾರ್ | | ಹಾಜರಿರುತ್ತಾರೆ. |

ಪು.ತಿ.ನೋ 2ಕ್ಕೆ

Scanned with CamScanner

1. **ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ)**

ವಾರ್ಡ್ ವ್ಯಾಪ್ತಿಯಲ್ಲಿ ಸಮರ್ಪಕವಾಗಿ ಘನತ್ಯಾಜ್ಯ ನಿರ್ವಹಣೆ ಮಾಡಲಾಗುತ್ತಿದ್ದು ನಿರ್ದಿಷ್ಟವಾಗಿರುವುದಿಲ್ಲ ಹಾಗೂ ಕ್ರಿಮಿನಾಶಕ ಔಷಧಿಯನ್ನು ಸಿಂಪಡಣೆ ಮಾಡುವ ಕಾರ್ಯಕ್ರಮ ಕೈಗೊಳ್ಳಲು ಹಾಗೂ ಘನತ್ಯಾಜ್ಯ ವಿಲೇವಾರಿ ಸಮರ್ಪವಾಗಿ ಮಾಡುವ ಬಗ್ಗೆ ಕೋರಲಾಗಿರುತ್ತದೆ ಮತ್ತು ಖಾಲಿ ಜಾಗದಲ್ಲಿ ಕೊಳಚೆ ನೀರು ತೆರವುಗೊಳಿಸುವುದು.

ಈ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ಬೊಮ್ಮನಹಳ್ಳಿ ವಲಯ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

2. **ಸಹಾಯಕ ಕಾರ್ಯಪಾಲಕ ಅಭಿಯಂತರರು (ಕಾಮಗಾರಿ) ಇಲಾಖೆ:-**

ವಾರ್ಡ್ ವ್ಯಾಪ್ತಿಯಲ್ಲಿ ಸಮಾರಂಭಗಳನ್ನು ಕೈಗೊಳ್ಳಲು, ನಟರಾಜ ಬಡಾವಣೆಯ ಅಸೋಸಿಯೇಷನ್ ರವರಿಂದ ಅನುಮತಿ ಪಡೆಯುವ ಬಗ್ಗೆ ಕೋರಲಾಗಿದ್ದು, ಶ್ರೇಯಸ್ ಕಾಲೋನಿ 12ನೇ ಅಡ್ಡ ರಸ್ತೆ, 4ನೇ ಮುಖ್ಯ ರಸ್ತೆಯ ಚರಂಡಿಯಲ್ಲಿ ತುಂಬಿರುವ ಹೂಳುನ್ನು ತೆರವುಗೊಳಿಸಲು ಕೋರಿರುತ್ತಾರೆ ಮತ್ತು ಒಂಟಿ ಮನೆ ಕಡತಗಳನ್ನು ಬಿಲ್ಲಿಗಾಗಿ ಸಲ್ಲಿಸುವುದು ಹಾಗೂ ಪಾದಚಾರಿ ಮಾರ್ಗದ ಒತ್ತುವರಿಯನ್ನು ತೆರವುಗೊಳಿಸಲು ಕೋರಿರುತ್ತಾರೆ.

ಈ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ಅಂಜನಾಪುರ ಉಪ ವಿಭಾಗ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

3. **ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಂಗಳೂರು ನೀರು ಸಬರಾಜು ಮತ್ತು ಒಳಚರಂಡಿ ಮಂಡಳಿ) ಇಲಾಖೆ:-**

ಶ್ರೀಮತಿ ಕುಮಾರಿ ರವರು ವಾರ್ಡ್ ವ್ಯಾಪ್ತಿಯಲ್ಲಿ ಬರುವ ಬೀರೇಶ್ವರನಗರ ಪುಟ್ಟಮ್ಮ ಬಡಾವಣೆಯಲ್ಲಿ ನಿರ್ಮಿಸುತ್ತಿರುವ ಕಟ್ಟಡದ, ಒಳಚರಂಡಿ ನೀರನ್ನು ರಸ್ತೆಗೆ ಬಿಟ್ಟಿರುವುದಾಗಿ ತಿಳಿಸಿರುತ್ತಾರೆ.

ಈ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

4. **ಅರಣ್ಯಾಧಿಕಾರಿಗಳು (ಬೊಮ್ಮನಹಳ್ಳಿ ವಲಯ) ಇಲಾಖೆ:-**

ವಾರ್ಡ್ ವ್ಯಾಪ್ತಿಯಲ್ಲಿ ಬರುವ ನಟರಾಜ ಬಡಾವಣೆಯಲ್ಲಿ ಗಿಡಗಳನ್ನು ಟ್ರೀಂ ಮಾಡಲು ಹಾಗೂ ಗಿಡ ಗಂಡಿಗಳನ್ನು ತೆರವುಗೊಳಿಸಲು ನಟರಾಜ ಬಡಾವಣೆಯ ಸಾರ್ವಜನಿಕರು ಕೋರಿರುತ್ತಾರೆ.

ಈ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

**5.ನೋಡಲ್ ಅಧಿಕಾರಿ:-**

ಅದರಂತೆ ವಾರ್ಡ್ ನೋಡಲ್ ಅಧಿಕಾರಿ ಹಾಗೂ ಅಧ್ಯಕರಾದ ಶ್ರೀ ಟಿ.ನಟರಾಜ ರವರು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಆದ್ಯತೆ ಮೇರೆಗೆ ಸೂಕ್ತ ಕ್ರಮ ಜರುಗಿಸಲಾಗುವುದಾಗಿ ತಿಳಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

-ಸಹಿ-
ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.195 ಕೋಣನಕುಂಟೆ

-ಸಹಿ-
ಅಧ್ಯಕ್ಷಕರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ.195 ಕೋಣನಕುಂಟೆ

Scanned with CamScanner